ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 23–09–2021

# ಮಾಧ್ಯಮ ಆಹ್ವಾನ
# Media Invitation

1. ಭಾರತ ಸ್ವಾತಂತ್ರ್ಯೋತ್ಸವ ಅಮೃತ ಮಹೋತ್ಸವ ಅಂಗವಾಗಿ "ಪ್ರಜಾಪ್ರಭುತ್ವ: ಸಂಸದೀಯ ಮೌಲ್ಯಗಳ ರಕ್ಷಣೆ" ಕುರಿತು ಜಂಟಿ ಅಧಿವೇಶನ

ಪ್ರಧಾನ ಭಾಷಣ:
ಶ್ರೀ ಓಂ ಬಿರ್ಲಾ, ಲೋಕಸಭಾ ಸಭಾಧ್ಯಕ್ಷರು.

ಉಪಸ್ಥಿತಿ:
ಬಸವರಾಜ ಹೊರಟ್ಟಿ, ಸಭಾಪತಿಗಳು, ಕರ್ನಾಟಕ ವಿಧಾನಪರಿಷತ್
ವಿಶ್ವೇಶ್ವರ ಹೆಗಡೆ ಕಾಗೇರಿ, ಸಭಾಧ್ಯಕ್ಷರು, ಕರ್ನಾಟಕ ವಿಧಾನಸಭೆ

ದಿನಾಂಕ: 24–09–2021, ಶುಕ್ರವಾರ
ಸಮಯ: ಮಧ್ಯಾಹ್ನ 2–30 ಗಂಟೆಗೆ
ಸ್ಥಳ: ವಿಧಾನಸಭೆಯ ಸಭಾಂಗಣ, ವಿಧಾನಸೌಧ, ಬೆಂಗಳೂರು.

ವಿ.ಸೂ: ಅಧಿವೇಶನದ ವರದಿಗಾಗಿ ಈಗಾಗಲೇ ಪಡೆದಿರುವ ಅಧಿಕೃತ ಪ್ರವೇಶ ಪತ್ರ ಹೊಂದಿರುವ ಮಾಧ್ಯಮ ಪ್ರತಿನಿಧಿಗಳಿಗೆ ಮಾತ್ರ ಪ್ರವೇಶವಿರುತ್ತದೆ.

## 2. Church Street: "Clean Air Street" report release programme

Date: 24-09-2021 Friday, Time: 4.00 P.M

Place: MG Road Metro Station entry/ Exit on Church Street close to the Brigade Road Entrance.

# ಪತ್ರಿಕಾ ಪ್ರಕಟಣೆ
**PRESS RELEASE**

## ಹಳ್ಳಿಗಳು ಅಭಿವೃದ್ಧಿಯಾದರೆ–ದೇಶ ಅಭಿವೃದ್ಧಿಯಾದಂತೆ
**ಕೇಂದ್ರ ಸಚಿವ: ಗಿರಿರಾಜ್ ಸಿಂಗ್**

ಬೆಂಗಳೂರು, ಸೆಪ್ಟೆಂಬರ್ 23 (ಕರ್ನಾಟಕ ವಾರ್ತೆ):

ಭಾರತದ ಸರ್ಕಾರ ದೆಹಲಿಯಲ್ಲಿ ಕೇಂದ್ರೀಕೃತವಾಗಿದ್ದರೆ, ಗ್ರಾಮ ಪಂಚಾಯತಿಗಳ ಸರ್ಕಾರ ಗ್ರಾಮಗಳಲ್ಲಿ ಕೇಂದ್ರೀಕೃತವಾಗಿದ್ದು, ಕೇಂದ್ರ ಸರ್ಕಾರ ಗ್ರಾಮೀಣಾಭಿವೃದ್ಧಿಗಾಗಿ ಅತಿ ಹೆಚ್ಚಿನ ಅನುದಾನವನ್ನು ಒದಗಿಸುವ ಮೂಲಕ ಹಳ್ಳಿಗಳು ಅಭಿವೃದ್ಧಿಯಾದರೆ ದೇಶ ಅಭಿವೃದ್ಧಿಯಾದಂತೆ ಎಂಬ ಪ್ರಧಾನಿಗಳ ಕನಸಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಗಿರಿರಾಜ್ ಸಿಂಗ್ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಭಾರತ ಸ್ವಾತಂತ್ರ್ಯೋತ್ಸವದ ಅಂಗವಾಗಿ ರಾಜ್ಯ ಸರ್ಕಾರ ಇತ್ತೀಚಿಗೆ ನೂತನವಾಗಿ ಘೋಷಿಸಿದ್ದ ಅಮೃತ ಗ್ರಾಮಪಂಚಾಯಿತಿ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಸಚಿವರು ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ಕನಸಾಗಿದ್ದ ಗ್ರಾಮ ಸ್ವರಾಜ್ಯದ ಕಲ್ಪನೆಯಲ್ಲಿ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿಗಾಗಿ ಮುಂದಾಗಿರುವ ರಾಜ್ಯ ಸರ್ಕಾರದ ಈ ಯೋಜನೆ ಅತ್ಯಂತ ಅರ್ಥಗರ್ಭಿತವಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಶ್ಲಾಘಿಸಿದರು.

ಗ್ರಾಮಗಳ ಜೀವಾಳವಾಗಿರುವ ಕೃಷಿಕರ ಆರ್ಥಿಕ ಅಭಿವೃದ್ಧಿಯನ್ನು ಮುಖ್ಯವಾಗಿ ಗಮನದಲ್ಲಿಟ್ಟುಕೊಂಡು ಪ್ರಧಾನಮಂತ್ರಿಗಳು ರೈತರ ಆದಾಯ ದ್ವಿಗುಣಗೊಳಿಸುವ ಗುರಿಯನ್ನು ಸಾಕಾರಗೊಳಿಸುವಲ್ಲಿ ನಿರತರಾಗಿದ್ದಾರೆ, ಮಹಿಳಾ ಸಬಲೀಕರಣವನ್ನು ಮಹಿಳಾ ಸ್ವ-ಸಹಾಯ ಗುಂಪುಗಳ ಮೂಲಕ ಹಮ್ಮಿಕೊಳ್ಳಲಾಗುತ್ತಿದೆ. ಮುಖ್ಯವಾಗಿ ಶಿಕ್ಷಣವನ್ನು ಗಮನದಲ್ಲಿರಿಸಿಕೊಂಡು ಹಳ್ಳಿಗಳ ಶಾಲೆಗಳ ಅಭಿವೃದ್ಧಿ ಹಾಗೂ ಇ-ಲೈಬ್ರರಿ ಸ್ಥಾಪನೆಗೆ ಮುಂದಾಗಿರುವುದು ತಳ ಮಟ್ಟದಿಂದ ಹಳ್ಳಿಗಳನ್ನು ಕಟ್ಟುವ ಕೆಲಸ ಈ ಯೋಜನೆಯಿಂದಾಗುತ್ತಿದೆ.

ಈಗಾಗಲೇ ಕೇಂದ್ರ ಸರ್ಕಾರ ಉತ್ತಮ ಗ್ರಾಮ ಪಂಚಾಯಿತಿಗಳೆಂದು ಗುರುತಿಸಿ ಅವುಗಳ ಅಭಿವೃದ್ಧಿ ಕಾರ್ಯಗಳನ್ನು ದೇಶಾದ್ಯಂತ ಪ್ರಶಂಸಿಸಲು ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. ಕರ್ನಾಟಕ ರಾಜ್ಯದ ಈ ನೂತನ ಯೋಜನೆ ದೇಶಕ್ಕೆ ಮಾದರಿಯಾಗಲಿ ಎಂದು ಹಾರೈಸಿದರು.

ಕಲಬುರಗಿಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಂಸ್ಥೆಯ ಪ್ರಾದೇಶಿಕ ಕೇಂದ್ರವನ್ನು ಆನ್‌ಲೈನ್ ಮೂಲಕ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಗ್ರಾಮ ಪಂಚಾಯಿತಿಗಳ ಸ್ಥಾಪನೆಯ ಮೂಲಕ ಅಧಿಕಾರ ವಿಕೇಂದ್ರಿಕರಣಗೊಳಿಸಿ ದೇಶಕ್ಕೆ ಮಾದರಿಯಾದ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ರಾಮಕೃಷ್ಣ ಹೆಗಡೆ ಮತ್ತು ಮಾಜಿ ಸಚಿವ ಅಬ್ದುಲ್ ನಜೀರ್ ಸಾಬ್ ಅವರ ಕೊಡುಗೆಯನ್ನು ಸ್ಮರಿಸಿ ಪ್ರಜೆಗಳು ಕೊಟ್ಟ ಅಧಿಕಾರವನ್ನು ಪ್ರಜಾಪ್ರಭುತ್ವದ ಅಡಿಯಲ್ಲಿ ಜನರಿಂದ, ಜನರಿಗಾಗಿ, ಜನರಿಗೋಸ್ಕರ ತಮ್ಮದೇ ಸರ್ಕಾರದಡಿಯಲ್ಲಿ ಗ್ರಾಮೀಣರು ತಮ್ಮ ಬದುಕನ್ನು ಕಟ್ಟಿಕೊಳ್ಳುವಂತಾಗಬೇಕು ಎಂದು ಹೇಳಿದರು.

ತಾವು ಮುಖ್ಯಮಂತ್ರಿಗಳಾಗಿ ಈ ಮಾತನ್ನು ಹೇಳುತ್ತಿಲ್ಲ, ಒಬ್ಬ ರೈತನ ಮಗನಾಗಿ ಹಾಗೂ ಸ್ವತಃ ರೈತನಾಗಿ ಈ ಮಾತನ್ನು ಹೇಳುತ್ತಿದ್ದು, ಗ್ರಾಮೀಣ ಭಾಗಗಳಲ್ಲಿ ಬದುಕುವ ರೈತರ ಬದುಕು ಅಭಿವೃದ್ಧಿಯಾದಲ್ಲಿ ದೇಶ ಅಭಿವೃದ್ಧಿಯಾದಂತೆ. ಜನರ ಸಹಭಾಗಿತ್ವದಲ್ಲಿ ಪ್ರಜಾಪ್ರಭುತ್ವ ಯಶಸ್ವಿಯಾಗಲು ಸಾಧ್ಯ, ಜನರನ್ನು ಭಾಗೀದಾರರನ್ನಾಗಿಸಿಕೊಂಡು ಅಭಿವೃದ್ಧಿ ಮಾಡುವ ಈ ನೂತನ ಯೋಜನೆ ದೇಶಕ್ಕೆ ಮಾದರಿಯಾಗಲಿ ಎಂದರು.

ಕೆಳ ಹಂತದಿಂದ ಅಭಿವೃದ್ಧಿಯಾದರೆ ಮಾತ್ರ ಸಮಾಜದ ಕಟ್ಟಕಡೆಯ ಮನುಷ್ಯನನ್ನು ಸಹ ಮುಟ್ಟಲು ಸಾಧ್ಯ, ಕಳೆದ ಆಗಸ್ಟ್ 15 ರಂದು ಘೋಷಣೆ ಮಾಡಲಾಗಿದ್ದ ಈ ನೂತನ ಯೋಜನೆಯನ್ನು ಜಾರಿಗೆ ತರುತ್ತಿರುವ ಸಚಿವ ಈಶ್ವರಪ್ಪ ಮತ್ತು ಅಧಿಕಾರಿಗಳ ತಂಡ ನಿಜಕ್ಕೂ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ. ಮುಂದಿನ ಸಾಲಿನ ಮಾರ್ಚ್ ಅಂತ್ಯದೊಳಗೆ 750 ಗ್ರಾಮ ಪಂಚಾಯಿತಿಗಳ ಅಭಿವೃದ್ಧಿಯ ಈ ಯೋಜನೆಯನ್ನು ಪೂರ್ಣಗೊಳಿಸುವುದಾಗಿದೆ. ಈ ರೀತಿ ಸವಾಲಾಗಿ ಸ್ವೀಕರಿಸಿ ಈ ಯೋಜನೆಯನ್ನು ಯಶಸ್ವಿಗೊಳಿಸಿದ್ದಲ್ಲಿ ಮತ್ತೇ ಈ ಯೋಜನೆಯನ್ನು ರಾಜ್ಯದ 3000 ಗ್ರಾಮ ಪಂಚಾಯಿತಿಗಳಿಗೆ ವಿಸ್ತರಿಸುವುದಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಈ ಯೋಜನೆಯಡಿಯಲ್ಲಿ ಘೋಷಿಸಲಾಗಿರುವ 750 ಗ್ರಾಮ ಪಂಚಾಯ್ತಿಗಳ ಅಭಿವೃದ್ಧಿಗಾಗಿ 2300 ಕೋಟಿ ರೂ. ಅನುದಾನ ನಿಗಧಿಪಡಿಸಲಾಗಿದೆ, ತಲಾ ಒಂದು ಗ್ರಾಮ ಪಂಚಾಯಿತಿಗೆ ಮೂರು ಕೋಟಿ ರೂ ಅನುದಾನ

ಒದಗಿಸಲಾಗುತ್ತಿದೆ. ಗ್ರಾಮಗಳಲ್ಲಿ ಆರ್ಥಿಕ ಚಟುವಟಿಕೆಗಳಿಗೆ ಪೂರಕವಾಗಿ ಅಭಿವೃದ್ಧಿಯನ್ನು ಕೈಗೊಳ್ಳಬೇಕು, ಮುಖ್ಯವಾಗಿ ಮಹಿಳಾ ಸಬಲೀಕರಣವನ್ನು ಮಹಿಳಾ ಸ್ವ-ಸಹಾಯ ಗುಂಪುಗಳ ಮೂಲಕ ಹಮ್ಮಿಕೊಳ್ಳಲು ಯೋಜಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿ ಮುಖ್ಯ ಗುರಿಯಾಗಿದ್ದು, ಇವರ ತಲಾ ಆದಾಯ ಹೆಚ್ಚಾದಲ್ಲಿ ರಾಜ್ಯದ ತಲಾ ಆದಾಯ ಸಹ ಹೆಚ್ಚಾಗುತ್ತದೆ. ಸಹಕಾರ ಕ್ಷೇತ್ರ ಗ್ರಾಮೀಣ ಭಾಗಗಳಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂಬುದನ್ನು ಮನಗಂಡು ಅದನ್ನು ಸಹ ಮುಖ್ಯವಾಗಿ ಪರಿಗಣಿಸಲಾಗಿದೆ.

ಹಳ್ಳಿಗಳಲ್ಲಿ ಪ್ರತಿ ಮನೆಗೆ ಕುಡಿಯುವ ನೀರು ಒದಗಿಸುವ ಗುರಿಯೊಂದಿಗೆ ಕಾರ್ಯನಿರ್ವಹಿಸುತ್ತಿರುವವರ ಕೇಂದ್ರ ಸರ್ಕಾರದ ಜಲಜೀವನ್ ಯೋಜನೆಗೆ ಈಗಾಗಲೇ 2000 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದೆ. ರೈತರ ಆದಾಯ ದ್ವಿಗುಣಗೊಳಿಸುವ ಪ್ರದಾನಿಗಳ ಉದ್ದೇಶದಂತೆ ಗ್ರಾಮಗಳಲ್ಲಿ ರೈತ ಸಹಕಾರ ಸಂಘಗಳ ಸ್ಥಾಪನೆಗೆ ಸರ್ಕಾರ ಮುಂದಾಗಿದೆ.

ಒಟ್ಟಾರೆಯಾಗಿ ಹಳ್ಳಿಗಳ ಅಭಿವೃದ್ಧಿಗೆ ಮುಂದಾಗಿರುವ ರಾಜ್ಯ ಸರ್ಕಾರ, ಜನರು ತಮ್ಮ ಕೆಲಸಗಳಿಗಾಗಿ ಸರ್ಕಾರಿ ಕಚೇರಿಗಳ ಅಭಿವೃದ್ಧಿಗೆ ಅಲೆಯುವುದನ್ನು ತಪ್ಪಿಸಲು ರಾಜ್ಯದ 5 ಜಿಲ್ಲೆಗಳಲ್ಲಿ ಶೀಘ್ರದಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಕಲ ಸರ್ಕಾರಿ ಸೇವೆಗಳನ್ನು ಒದಗಿಸುವ ನೂತನ ಯೋಜನೆಯನ್ನು ಪ್ರಾಯೋಗಿಕವಾಗಿ ಮುಂದಿನ ಜನವರಿಯಿಂದ ಜಾರಿಗೆ ತರಲು ಉದ್ದೇಶಿಸಿಲಾಗಿದೆ. ಗ್ರಾಮ ಪಂಚಾಯಿತಿಗಳು ಗ್ರಾಮ ಸೇವಾ ಸಂಸ್ಥೆಗಳಾಗಿ ಬದಲಾಯಿಸಲಾಗುವುದು, ಇದರಿಂದ ಜನರ ಮನೆ-ಮನೆಗೆ ಸೇವೆಯನ್ನು ಒದಗಿಸಲಾಗುವುದು ಎಂದು ಹೇಳಿದರು.

ಕರ್ನಾಟಕ ರಾಜ್ಯದ ಅಭಿವೃದ್ಧಿ ಯೋಜನೆಗಳ ವಸ್ತುಪ್ರದರ್ಶನವನ್ನು ಉದ್ಘಾಟಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ಅವರು ಇದೊಂದು ಐತಿಹಾಸಿಕ ಸಂದರ್ಭವಾಗಿದ್ದು, ಭಾರತಕ್ಕೆ ಸ್ವಾತಂತ್ರ್ಯ ಬಂದು 75ನೇ ಈ ವರ್ಷದಲ್ಲಿ ಅಮೃತ ಗ್ರಾಮ ಪಂಚಾಯಿತಿ ಯೋಜನೆಯ ಘೋಷಣೆ ಮಾಡಿರುವುದು ಅತ್ಯಂತ ಸಂತಸದ ವಿಷಯ ಎಂದು ಹೇಳಿದರು.

ದೇಶದ್ಯಾಂತ ಈ ಸಂದರ್ಭದಲ್ಲಿ ಹಲವು ಸರ್ಕಾರಗಳು ನೂರಾರು ಯೋಜನೆಗಳನ್ನು ಘೋಷಿಸಿವೆ, ಇಂತಹ ಸಂದರ್ಭದಲ್ಲಿ ನಮ್ಮ ಮುಖ್ಯಮಂತ್ರಿಗಳು ಸಹ 13 ಯೋಜನೆಗಳನ್ನು ಘೋಷಿಸಿದ್ದು, ಅದರಲ್ಲಿ 10 ಯೋಜನೆಗಳು ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದ್ದು, ಇಂತಹ ನಿರ್ಣಯವನ್ನು ಕೈಗೊಂಡಿರುವ ಮುಖ್ಯಮಂತ್ರಿಗಳ ಗ್ರಾಮೀಣ ಪ್ರೀತಿಯನ್ನು ತೋರಿಸುತ್ತದೆ ಅವರಿಗೆ ಅಭಿನಂದನೆಗಳು.

ಗ್ರಾಮಗಳ ಸರ್ವಾಂಗಿಣ ಅಭಿವೃದ್ಧಿಗಾಗಿ ಮಹತ್ವವನ್ನು ನೀಡಲಾಗಿದ್ದು, ರಾಜ್ಯದ 6000 ಗ್ರಾಮ ಪಂಚಾಯಿತಿಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಮೊದಲನೇ ಹಂತದಲ್ಲಿ ಅಮೃತ ಯೋಜನೆಯಡಿ 750 ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಗ್ರಾಮಗಳಲ್ಲಿ ಅವಶ್ಯವಿರುವ ಬೀದಿ ದೀಪ, ಕುಡಿಯುವ ನೀರು, ಘನ ತ್ಯಾಜ್ಯ ನಿರ್ವಹಣೆ ಸೇರಿದಂತೆ ಶಾಲೆಗಳ ಅಭಿವೃದ್ಧಿಯನ್ನು ಒಳಗೊಂಡಿರುತ್ತದೆ.

ಕೋವಿಡ್ ಕಾಲದಲ್ಲಿ ಸಹ ಗ್ರಾಮೀಣಾಭಿವೃದ್ಧಿ ಯೋಜನೆಯಡಿಯಲ್ಲಿ ಬಡವರಿಗೆ ಕೆಲಸ ಒದಗಿಸುವ ಮೂಲಕ ಕೂಲಿ ನೀಡಲಾಗಿದೆ, ನಮ್ಮ ಗ್ರಾಮ-ನಮ್ಮ ರಸ್ತೆ ಯೋಜನೆ, ಗ್ರಾಮಗಳ ಕೆರೆಗಳು ಮತ್ತು ನೀರಿನ ಮೂಲಗಳ ಕಾರ್ಯಗಳನ್ನು ಕೈಗೆತ್ತಿಕೊಂಡು ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗಿದೆ.

ಪಂಚಾಯತ್ ರಾಜ್ಯ ವ್ಯವಸ್ಥೆಯನ್ನು ಬಲಪಡಿಸಲು ಹಲವು ಕ್ರಮಗಳನ್ನು ಕೈಗೊಳ್ಳಲಾಗಿದ್ದು, ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಯಶಸ್ವಿಯಾಗಿ ಚುನಾವಣೆ ಪೂರ್ಣಗೊಳಿಸಲಾಗಿದ್ದು, ಚುನಾಯಿತರಾದ ಪ್ರತಿನಿಧಿಗಳಿಗೆ ಉತ್ತಮ ತರಬೇತಿಗಳನ್ನು ನೀಡಲಾಗುತ್ತಿದೆ. ಅದಿಕಾರಿ ಮತ್ತು ಚುನಾಯಿತರನ್ನು ಒಳಗೊಂಡ ಸಭೆಗಳನ್ನು ಹಮ್ಮಿಕೊಳ್ಳುವ ಮೂಲಕ ಗ್ರಾಮೀಣಾಭಿವೃದ್ಧಿಗಾಗಿ ಪಣ ತೊಡಲಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕೇಂದ್ರ ಸಚಿವರಿಗೆ ನರೆಗಾ ಯೋಜನೆಯಡಿ ರಾಜ್ಯಕ್ಕೆ 20000 ಮಾನವ ದಿನಗಳನ್ನು ಸೃಜಿಸಲು ಅವಕಾಶ ನೀಡಬೇಕು, ಕೇಂದ್ರದ ಗ್ರಾಮೀಣಾಭಿವೃದ್ಧಿ ಯೋಜನೆಯಡಿ ರಾಜ್ಯದ 17000 ಕಿ.ಮೀ ಗ್ರಾಮೀಣ ರಸ್ತೆಯನ್ನು

ಅಭಿವೃದ್ಧಿಪಡಿಸಿ ಹಾಗೂ ನರೇಗಾ ಯೋಜನೆಯಡಿ ಶಾಲೆಗಳ ಅಭಿವೃದ್ಧಿ ಕಾರ್ಯವನ್ನು ಮಾಡಲು ಸರ್ಕಾರ ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಎನ್.ಆರ್..ಎಲ್.ಎಂ ಫಲಾನುಭವಿಗಳಿಗೆ ಸೌಲಭ್ಯ ಹಾಗೂ ಯಶಸ್ವಿಯಾಗಿ ತರಬೇತಿ ಪೂರ್ಣಗೊಳಿಸಿ ಉದ್ಯೋಗವನ್ನು ಪಡೆದಿರುವ ಯುವಕರಿಗೆ ಸಾಂಕೇತಿಕವಾಗಿ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ರಿಜ್ವಾನ್ ಅರ್ಷದ್ ಅವರು ವಹಿಸಿದ್ದರು, ರಾಜ್ಯ ಸಚಿವ ಸಂಪುಟದ ಅನೇಕ ಸಚಿವರುಗಳು, ಹಿರಿಯ ಅಧಿಕಾರಿಗಳು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಭಾಗವಹಿಸಿದ್ದರು.

## ರಾಜ್ಯದಲ್ಲಿ ಕೋವಿಡ್ 3ನೇ ಅಲೆ ತಡೆಗಟ್ಟಲು ಸಕಲ ಸಿದ್ಧತೆ : ಡಾ.ಕೆ.ಸುಧಾಕರ್

ಬೆಂಗಳೂರು, ಸೆಪ್ಟೆಂಬರ್ 23 (ಕರ್ನಾಟಕ ವಾರ್ತೆ):

ರಾಜ್ಯದಲ್ಲಿ ಮೂರನೇ ಅಲೆಯನ್ನು ತಡೆಗಟ್ಟಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಸಚಿವರಾದ ಡಾ. ಕೆ.ಸುಧಾಕರ್ ಅವರು ತಿಳಿಸಿದರು.

ಇಂದು ವಿಧಾನಸಭಾ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಎಂ. ಕೃಷ್ಣಪ್ಪ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಕೋವಿಡ್–19ರ ಮೂರನೇ ಅಲೆಯು ಮಕ್ಕಳ ಮೇಲೆ ಹೆಚ್ಚು ಅಪಾಯ ಬೀರಬಹುದು ಎಂದು ತಾಂತ್ರಿಕ ಸಲಹಾ ಸಮಿತಿಯು ನೀಡಿರುವ ಸೂಚನೆಯಂತೆ ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಆಕ್ಸಿಜನ್ ಬೆಂಬಲಿತ 25,870 ಹಾಸಿಗೆಗಳನ್ನು, 502 ಮಕ್ಕಳ ವೆಂಟಿಲೇಟರ್ ಸಿದ್ಧಪಡಿಸಲಾಗಿದೆ. 285 ಮಕ್ಕಳ ತಜ್ಞರು, 1,200 ವೈದ್ಯಾಧಿಕಾರಿಗಳು ಹಾಗೂ 1,202 ಶುಷ್ರೂಷಕರಿಗೆ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ ಸರ್ಕಾರಿ ವೈದ್ಯಕೀಯ ಕಾಲೇಜು ಹಾಗೂ ಸರ್ಕಾರಿ ಆಸ್ಪತ್ರೆಗಳಲ್ಲಿ ವಿಶೇಷ ತರಬೇತಿಯನ್ನು ನೀಡಲಾಗಿದೆ ಹಾಗೂ ಶೇಕಡ 20 ರಷ್ಟು ಹಾಸಿಗೆಗಳನ್ನು ಮಕ್ಕಳಿಗೆ ವಿಶೇಷವಾಗಿ ಮೀಸಲಿಡಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು.

## ಸುಸಜ್ಜಿತ ಡಯಾಲಿಸಿಸ್ ವ್ಯವಸ್ಥೆ : ಡಾ.ಕೆ.ಸುಧಾಕರ್

ಬೆಂಗಳೂರು, ಸೆಪ್ಟೆಂಬರ್ 23 (ಕರ್ನಾಟಕ ವಾರ್ತೆ):

ರಾಜ್ಯದಲ್ಲಿ ಸುಸಜ್ಜಿತ ಡಯಾಲಿಸಿಸ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಸಚಿವರಾದ ಡಾ. ಕೆ.ಸುಧಾಕರ್ ಅವರು ತಿಳಿಸಿದರು.

ಇಂದು ವಿಧಾನಸಭಾ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಡಿ.ಎಸ್. ಸುರೇಶ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಡಯಾಲಿಸಿಸ್ ರೋಗಿಗಳ ಸೇವೆ ಬಹಳ ಮುಖ್ಯವಾದ ಸೇವೆಯಾಗಿದೆ ಎಂದು ಸರ್ಕಾರವು ಗಮನದಲ್ಲಿಟ್ಟುಕೊಂಡು ನಿರಂತರ ಸೇವೆ ಒದಗಿಸುತ್ತಿದೆ.

ಡಯಾಲಿಸಿಸ್ ರೋಗಿಗಳಿಗೆ ಸೇವೆ ನೀಡುತ್ತಿದ್ದ ಬಿ.ಆರ್.ಶೆಟ್ಟಿ ಸಂಸ್ಥೆಯು ಆರ್ಥಿಕ ನಷ್ಟದಿಂದ ಸೇವೆಯನ್ನು ಸ್ಥಗಿತಗೊಳಿಸಿರುವುದರಿಂದ ಸರ್ಕಾರವು ಇನ್ನೊಂದು ತಿಂಗಳಲ್ಲಿ ಬೇರೆ ಪರ್ಯಾಯ ವ್ಯವಸ್ಥೆ ಮಾಡಲಿದೆ ಎಂದು ಸರ್ಕಾರಕ್ಕೆ ಮಾಹಿತಿ ನೀಡಿದರು.

## ಡಾ: ಶಿವರಾಮಕಾರಂತ ಬಡಾವಣೆ : ಸಭೆ ಕರೆದು ಪರಿಹಾರ ಒದಗಿಸಲು ಕ್ರಮ

– ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ.

ಬೆಂಗಳೂರು, ಸೆಪ್ಟೆಂಬರ್ 23, (ಕರ್ನಾಟಕ ವಾರ್ತೆ):

ಡಾ: ಶಿವರಾಮಕಾರಂತ ಬಡಾವಣೆಯ ನಿರ್ಮಾಣಕ್ಕೆ ಸಂಬಂಧಿಸಿದಂತೆ ಬಿ.ಡಿ.ಎ, ಯು.ಡಿಎ ಅಧಿಕಾರಿಗಳು ಒಳಗೊಂಡಂತೆ ಜನ ಪ್ರತಿನಿಧಿಗಳ ಸಭೆ ಕರೆದು ಕೂಡಲೇ ತೀಮಾನ ಕೈಗೊಂಡು ಭೂಮಿ ಕಳೆದುಕೊಂಡ ರೈತರಿಗೆ ಪರಿಹಾರ ಒದಗಿಸಲು ಸರ್ಕಾರ ಕ್ರಮ ವಹಿಸುವುದಾಗಿ ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಕಲಾಪದ ವೇಳೆ, ವಿಧಾನ ಪರಿಷತ್ತಿನ ಸದಸ್ಯರಾದ ಎಂ. ನಾರಾಯಣಸ್ವಾಮಿ ಅವರು ನಿಯಮ–330 ರಡಿಯಲ್ಲಿ ಪ್ರಸ್ತಾಪಿಸಿದ ಸೂಚನಾ ಪತ್ರಕ್ಕೆ ಉತ್ತರಿಸಿದ ಮುಖ್ಯಮಂತ್ರಿಗಳು ಬೆಂಗಳೂರು ನಗರವನ್ನು ನಗರೀಕರಣಗೊಳಿಸುವ ಉದ್ದೇಶದಿಂದ, ಬೆಂಗಳೂರು ಉತ್ತರ, ಬೆಂಗಳೂರು ಉತ್ತರ ಅಪರ ತಾಲ್ಲೂಕಿನ ಸೋಮಶೆಟ್ಟಿಹಳ್ಳಿ, ಲಕ್ಷ್ಮೀಪುರ, ಗಾಣೀಗರಹಳ್ಳಿ, ಬ್ಯಾಲಕೆರೆ, ಕಾಳತಮ್ಮನಹಳ್ಳಿ, ಗುಣಿಅಗ್ರಹಾರ, ಕೆಂಪಾಪುರ, ಮೇಡಿಅಗ್ರಾಹಾರ, ಆವಲಹಳ್ಳಿ, ವಡೇರಹಳ್ಳಿ, ರಾಮಗೊಂಡನಹಳ್ಳಿ, ಕೆಂಪನಹಳ್ಳಿ, ವೀರಸಾಗರ, ದೊಡ್ಡಬೆಟ್ಟಹಳ್ಳಿ, ಹಾರೋಹಳ್ಳಿ, ಶಾಮರಾಜಪುರ ಮತ್ತು ಜಾರಕಬಂಡೆಕಾವಲ್ ಗ್ರಾಮಗಳ ಒಟ್ಟು 3546 ಎಕರೆ 12 ಗುಂಟೆ ಜಮೀನಿಗೆ ಡಾ. ಕೆ. ಶಿವರಾಮ ಕಾರಂತ ಬಡಾವಣೆಗಾಗಿ ದಿನಾಂಕ: 30–12–2008ರಂದು ಅಧಿಸೂಚನೆ ಹೊರಡಿಸಲಾಗಿತ್ತು. ಮಾನ್ಯ ಉಚ್ಚ ನ್ಯಾಯಾಲವು ರಿಟ್ ಅರ್ಜಿ ಸಂಖ್ಯೆ 12908/2005 ದಿನಾಂಕ: 02–09–2015ರಲ್ಲಿ ಅಧಿಸೂಚನೆಯನ್ನು ರದ್ದುಪಡಿಸಿ, ಆದೇಶ ಹೊರಡಿಸಿರುತ್ತದೆ.

ಈ ಆದೇಶದ ವಿರುದ್ಧ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮಾನ್ಯ ಉಚ್ಚನ್ಯಾಯಾಲಯದ ವಿಭಾಗೀಯ ಪೀಠದಲ್ಲಿ ಮೇಲ್ಮನವಿ ದಾಖಲಿಸಿದ್ದು, ಈ ಮೇಲ್ಮನವಿಯು ದಿನಾಂಕ: 28–04–2017ರಂದು ವಜಾಗೊಂಡಿರುತ್ತದೆ. ಪ್ರಾಧಿಕಾರವು ಆದೇಶವನ್ನು ಪುನಃ ಪ್ರಶ್ನಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದ್ದು, ಘನ ನ್ಯಾಯಾಲಯವು ಸಿವಿಲ್ ಅಪೀಲ್ ಸಂ. 766–63/2018 ದಿನಾಂಕ: 03–08–2018ರಲ್ಲಿ ಸಂಪೂರ್ಣ ವಿಸ್ತೀರ್ಣಕ್ಕೆ ಬಿ.ಡಿ.ಎ. ಕಾಯ್ದೆ 1976 ಕಲಂ 19(1)ರಡಿ ಅಂತಿಮ ಅಧಿಸೂಚನೆಯನ್ನು ಹೊರಡಿಸಿ ಆದೇಶಿಸಿರುತ್ತದೆ.

4. Needless to state that the acquisition of the land under the BDA Actis regulated by the provisions of the LA Act so far as they are applicable. (See: Section 36 of the BDA Act) The borrowd provisions of LA Act, become an integral part of the BDA Act and are totally unaffected by the repeal of the La Act. In othe words, the provisions of the LA Act are incorporated into the BDA Act so far as they are applicable. Of course, the bar contained in Section 6 and 11-A of the LA Act, are not applicable to the BDA Act. We have discussed this aspect of the matter in our mail judgment dated 03-08-2018. it is also clear that the provisions of the Right to Fair Compensation and Transparency in Land Acquisition, Rehabilitation & Resettlement Act, 2013 are not applicable for the acquisition made under the BDA Act. Final notification has been issued after the pronouncement of judgment by this Court in Civil Appeal No(S).7661-7663 of 2018 date 3.8.2018. We direct the BDA to proceed with the acquisition of the land as proposed in the notification.

ಮಾನ್ಯ ಸವೋಚ್ಚ ನ್ಯಾಯಾಲಯದ ಆದೇಶದಂತೆ ಸರ್ಕಾರದ ಆದೇಶ ಸಂ. ನಇ 553 ಬೆಂಭೂಸ್ವಾ 2018 ದಿನಾಂಕ: 29–10–2018ರಲ್ಲಿ ಒಟ್ಟು 3546 ಎಕರೆ 12 ಗುಂಟೆ ಜಮೀನುಗಳನ್ನು ಭೂಸ್ವಾಧೀನ ಪಡಿಸಿಕೊಳ್ಳಲು ಹಾಗೂ ಈ ಯೋಜನೆಗೆ ಸಂಬಂಧಿಸಿದಂತೆ ಭೂಮಾಲಿಕರು 60:40ರ ಅನುಪಾತದಲ್ಲಿ ಪ್ರಾಧಿಕಾರದಿಂದ ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಪಡೆಯಲು ಅಥವಾ ನಗದು ಪರಿಹಾರವನ್ನು ಪಡೆಯಲು ಇಚ್ಛೆ ವ್ಯಕ್ತಪಡಿಸಿದಲ್ಲಿ ಪ್ರಾಧಿಕಾರವು ಅಭಿವೃದ್ಧಿಪಡಿಸಿದ ನಿವೇಶನವನ್ನು

ಅಥವಾ ನಗದು ಭೂಪರಿಹಾರವನ್ನು ಪಾವತಿಸಬೇಕಾಗುತ್ತದೆ ಎಂದು ತಿಳಿಸಿ ಈ ಯೋಜನೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಕಾಯ್ದೆ 1976ರ ಕಲಂ 18(3)ರಡಿ ಯೋಜನಾ ಮಂಜೂರಾತಿಯನ್ನು ನೀಡಲಾಗಿರುತ್ತದೆ.

ಪ್ರಾಧಿಕಾರವು ಬಿಡಿಎ ಕಾಯ್ದೆ ಕಲಂ 17(1)ರಡಿ ಭೂ ಸ್ವಾಧೀನ ಪ್ರಕ್ರಿಯೆಗಳನ್ನು ಕೈಗೊಂಡಿರುವುದರಿಂದ Right to fair Compensation and Transparency in Land Acquisition, Rehabilitation & Resettlement Act 2013 ರ ಕಾಯ್ದೆಯು ಅನ್ವಯವಾಗುವುದಿಲ್ಲವೆಂದು ಘನ ನ್ಯಾಯಾಲಯವು ಸ್ಪಷ್ಟವಾಗಿ ನಿರ್ದೇಶನ ನೀಡಿದ್ದು, ಅದರಂತೆ ಯೋಜನಾ ಮಂಜೂರಾತಿಯನ್ನು ನೀಡಿರುತ್ತದೆ.

ಬಹುತೇಕ ರೈತರು ತಮ್ಮ ಆಕ್ಷೇಪಣೆಗಳಲ್ಲಿ Right to fair Compensation and Transparency in Land Acquisition, Rehabilitation & Resettlement Act 2013 ರ ಕಾಯ್ದೆಯಡಿ ನಗದು ಪರಿಹಾರ ನೀಡಲು ಕೋರಿದ್ದು, ಮೇಲ್ಕಂಡ ಘನ ನ್ಯಾಯಾಲಯದ ಆದೇಶದಂತೆ ಹೊಸ ಕಯ್ದೆಯಡಿ ಭೂಪರಿಹಾರ ನೀಡಲು ಅವಕಾಶವಿರುವುದಿಲ್ಲ.

ಈ ಬಡಾವಣೆಗೆ ದಿನಾಂಕ: 30-12-2008ರಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿರುವುದರಿಂದ ಘನ ಸರ್ವೋಚ್ಛ ನ್ಯಾಯಾಲಯದ ಹಾಗೂ ಸರ್ಕಾರದ ಆದೇಶದಂತೆ 2013ರ ಪೂರ್ವದಲ್ಲಿನ ಭೂ ಸ್ವಾಧೀನ ಕಾಯ್ದೆಯಂತೆ ನಗದು ಪರಿಹಾರ ಅಥವಾ 60:40ರ ಅನುಪಾತದಲ್ಲಿ ಪ್ರಾಧಿಕಾರದಿಂದ ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಪಡೆಯಲು ಇಚ್ಛೆ ವ್ಯಕ್ತಪಡಿಸಿದಲ್ಲಿ ಪ್ರಾಧಿಕಾರವು ನಗದು ಅಥವಾ ಅಭಿವೃದ್ಧಿ ಪಡಿಸಿದ ನಿವೇಶನವನ್ನು ಭೂಪರಿಹಾರದ ರೂಪದಲ್ಲಿ ಪಾವತಿಸುವ ಕುರಿತು ಐತೀರ್ಪುಗಳನ್ನು ರಚಿಸಿ ಭೂಸ್ವಾಧೀನ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುತ್ತದೆ ಎಂದು ತಿಳಿಸಿದರು.

ಈ ಸಂಬಂಧ ಕೂಡಲೇ ಬಿ.ಡಿ.ಎ ಮತ್ತು ಯುಡಿಎ ಅಧಿಕಾರಿಗಳು, ಜನಪ್ರತಿನಿಧಿಗಳು ಮತ್ತು ತಮ್ಮನ್ನು ಒಳಗೊಂಡಂತೆ ಸಭೆಯನ್ನು ಕರೆದು ಶೀಘ್ರದಲ್ಲಿಯೇ ಇದಕ್ಕೆ ಪರಿಹಾರ ರೂಪಿಸಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

## ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2021

ಬೆಂಗಳೂರು, ಸೆಪ್ಟೆಂಬರ್ 23, (ಕರ್ನಾಟಕ ವಾರ್ತೆ):

ವಿಧಾನ ಸಭಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಲು ಹಾಗೂ ವಿಧೇಯಕವನ್ನು ಅಂಗೀಕರಿಸುವಂತೆ ಸೂಚಿಸಲು ಸಹಕಾರ ಸಚಿವ ಎಸ್.ಟಿ. ಸೋಮಶೇಖರ್ ಅವರು ವಿಧಾನಪರಿಷತ್ತಿನಲ್ಲಿಂದು ಮಂಡಿಸಿದರು. ಸದನವು ಈ ಪ್ರಸ್ತಾವನೆಯನ್ನು ಅಂಗೀಕರಿಸಿತು.

## ಕಾರ್ಮಿಕರಿಗೆ ಕೋವಿಡ್-19ರ ಪರಿಹಾರ ಪಾವತಿಯಲ್ಲಿ ಕರ್ನಾಟಕ ರಾಜ್ಯವೇ ಪ್ರಥಮ

**- ಸಚಿವ ಅರಬೈಲ್ ಶಿವರಾಮ್ ಹೆಬ್ಬಾರ್**

ಬೆಂಗಳೂರು, ಸೆಪ್ಟೆಂಬರ್ 23, (ಕರ್ನಾಟಕ ವಾರ್ತೆ):

ಮಹಾಮಾರಿ ಕೋವಿಡ್ - ಪ್ರಥಮ ಅಲೆ ಮತ್ತು ಎರಡನೇ ಅಲೆ ಉಂಟದಾಗ ಕಾರ್ಮಿಕ ರಹಿತ ಕಾಪಾಡುವಲ್ಲಿ ವಿಶೇಷ ಪ್ಯಾಕೇಜ್ ಘೋಷಣೆ ಮಾಡಿದ್ದು, ಪರಿಹಾರ ಪಾವತಿ ಮಾಡಿದ ರಾಜ್ಯಗಳಲ್ಲಿ ಕರ್ನಾಟಕವು ಪ್ರಥಮ ಸ್ಥಾನದಲ್ಲಿದ್ದು, ಉತ್ತರ ಪ್ರದೇಶ ಎರಡನೇ ಸ್ಥಾನದಲ್ಲಿದೆ ಎಂದು ಕಾರ್ಮಿಕ ಸಚಿವ ಅರಬೈಲ್ ಶಿವರಾಮ ಹೆಬ್ಬಾರ್ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಕಲಾಪದ ವೇಳೆ, ವಿಧಾನ ಪರಿಷತ್ತಿನ ಸದಸ್ಯರಾದ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೋವಿಡ್ – 19 ಸಮಯದಲ್ಲಿ ಕರ್ನಾಟಕದಲ್ಲಿ ಕಾರ್ಮಿಕರು ಸಂಕಷ್ಟಕ್ಕೊಳಗಾದಾಗ, ಮೊದಲನೇ ಅಲೆಯಲ್ಲಿ ಸಂಕಷ್ಟಕ್ಕೊಳಗಾದ ರೂ. 5000/– ಹಾಗೂ ಎರಡನೇ ಅಲೆಯಲ್ಲಿ ಸಂಕಷ್ಟಕ್ಕೊಳಗಾದಾಗ ರೂ. 3000/– ನೆರವಿನ ಪ್ಯಾಕೇಜ್‌ನ್ನು ನೀಡಲಾಗಿದೆ.

ಪರಿಹಾರ ಪಾವತಿ ವಿಳಂಬವಾದ ಸಂಬಂಧ ಪರಿಹಾರ ಪಾವತಿಗಾಗಿ ಕಾರ್ಮಿಕ ಅದಾಲತ್ ನಡೆಸಿದಾಗ ಸುಮಾರು 3,54,000 ಪ್ರಕರಣ ಬಾಕಿ ಇದ್ದು, ಒಂದು ತಿಂಗಳಲ್ಲಿ ರೂ 92 ಕೋಟಿಗಳನ್ನು ಅಸಂಘಟಿತ ಕಾಮಿಕರಿಗೆ ನೇರವಾಗಿ ಡಿ.ಬಿ.ಟಿ ಅಡಿ ಪಾವತಿಸಲು ಕ್ರಮ ವಹಿಸಲಾಗಿದೆ. ಇನ್ನೂ 42 ಸಾವಿರ ಪ್ರಕರಣ ಬಾಕಿ ಇದ್ದು ಇನ್ನೂ ಹತ್ತು ದಿನಗಳಲ್ಲಿ ಅವರಿಗೂ ಪರಿಹಾರ ಪಾವತಿಗೆ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ನೋಂದಣಿಯಾಗದೇ ಇರುವ ಕಾಮಿಕರಿಗೆ ಪ್ರತಿ ವರ್ಷ ನೋಂದಣಿ ಮಾಡಿಕೊಳ್ಳಲು ಸೂಚನೆ ನೀಡಲಾಗಿದೆ ಎಂದು ಇದೇ ವೇಳೆಯಲ್ಲಿ ಸಚಿವರು ತಿಳಿಸಿದರು.

## ಜನ ಸಂಪರ್ಕ ಸಭೆ

ಬೆಂಗಳೂರು, ಸೆಪ್ಟೆಂಬರ್ 23 (ಕರ್ನಾಟಕ ವಾರ್ತೆ):

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಡಾ. ಶಿವರಾಮ ಕಾರಂತ ಬಡಾವಣೆಗೆ ಸಂಬಂಧಿಸಿದಂತೆ 24ನೇ ಸೆಪ್ಟೆಂಬರ್ 2021ರಂದು ಬೆಳಿಗ್ಗೆ 11:00 ಗಂಟೆಗೆ ಸರ್ಕಾರಿ ಶಾಲೆ, ಬ್ಯಾಲಕೆರೆಯಲ್ಲಿ ನ್ಯಾಯಮೂರ್ತಿ ಎ.ವಿ. ಚಂದ್ರಶೇಖರ್ ಸಮಿತಿಯು ಜನ ಸಂಪರ್ಕ ಸಭೆ ಹಮ್ಮಿಕೊಳ್ಳಲಾಗಿದೆ.

ಭಾರತದ ಘನ ಸರ್ವೋಚ್ಛ ನ್ಯಾಯಾಲಯದ ದಿನಾಂಕ 03.12.2020ರ ಆದೇಶದಲ್ಲಿನ ನಿರ್ದೇಶನದ ಅನುಸಾರ ನ್ಯಾಯಮೂರ್ತಿ ಎ.ವಿ. ಚಂದ್ರಶೇಖರ್ ಸಮಿತಿಯು ಡಿಸೆಂಬರ್ 2020ರಿಂದ ಕಾರ್ಯನಿರ್ವಹಿಸುತ್ತಿದೆ. ಡಾ. ಶಿವರಾಮ ಕಾರಂತ ಬಡಾವಣೆಯ ಅಧಿಸೂಚಿತ ಪ್ರದೇಶವನ್ನೊಳಗೊಂಡ 17 ಹಳ್ಳಿಗಳಲ್ಲಿನ 3546 ಎಕರೆ 12 ಗುಂಟೆಯ ಆಸ್ತಿ ಮಾಲೀಕರಲ್ಲಿ ತಪ್ಪು ಮಾಹಿತಿ, ತಪ್ಪು ತಿಳುವಳಿಕೆ ಮತ್ತು ಗೊಂದಲವಿರುವ ಬಗ್ಗೆ ಸಮಿತಿಯು ಗಮನಿಸಿದೆ.

ಆಸ್ತಿ ಮಾಲೀಕರಲ್ಲಿ ಉಂಟಾಗಿರುವ ಗೊಂದಲವನ್ನು ನಿವಾರಿಸಲು, ತಪ್ಪು ತಿಳುವಳಿಕೆಯನ್ನು ತೊಡೆದುಹಾಕಲು ಮತ್ತು ಘನ ಸರ್ವೋಚ್ಛ ನ್ಯಾಯಾಲಯದ ಆದೇಶಗಳ ವಾಸ್ತವ ಉದ್ದೇಶ ಹಾಗೂ ಪರಿಣಾಮಗಳನ್ನು ನೇರವಾಗಿ ಮಾಲೀಕರಿಗೆ ವಿವರಿಸಲು, ನ್ಯಾಯಮೂರ್ತಿ ಎ.ವಿ. ಚಂದ್ರಶೇಖರ್ (ನಿವೃತ್ತ ನ್ಯಾಯಾಧೀಶರು, ಕರ್ನಾಟಕ ಉಚ್ಛ ನ್ಯಾಯಾಲಯ), ಜಯಕರ್ ಜೆರೋಮ್, ಭಾ.ಆ.ಸೇ., (ನಿವೃತ್ತ), ಕರ್ನಾಟಕ ಸರ್ಕಾರ ಮತ್ತು ಡಾ. ಎಸ್.ಟಿ. ರಮೇಶ್, ಭಾ.ಪೊ.ಸೇ. (ನಿವೃತ್ತ), ಕರ್ನಾಟಕ ಸರ್ಕಾರ ಇವರನ್ನೊಳಗೊಂಡ ಸಮಿತಿಯು 24ನೇ ಸೆಪ್ಟೆಂಬರ್ 2021ರಂದು ಬೆಳಿಗ್ಗೆ 11:00 ಗಂಟೆಗೆ ಸರ್ಕಾರಿ ಶಾಲೆ, ಬ್ಯಾಲಕೆರೆಯಲ್ಲಿ ಡಾ. ಶಿವರಾಮ ಕಾರಂತ್ ಬಡಾವಣೆಯ ಆಸ್ತಿ ಮಾಲೀಕರ ಜೊತೆ ಜನಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ.

ಘನ ಸರ್ವೋಚ್ಛ ನ್ಯಾಯಾಲಯದ ನಿರ್ದೇಶನಗಳ ಮತ್ತು ನ್ಯಾಯಮೂರ್ತಿ ಎ.ವಿ. ಚಂದ್ರಶೇಖರ್ ಸಮಿತಿ ಮಾಡುತ್ತಿರುವ ಕಾರ್ಯಗಳ ಸರಿಯಾದ ಚಿತ್ರಣವನ್ನು ಪಡೆಯಲು ಎಲ್ಲಾ ಆಸ್ತಿ ಮಾಲೀಕರು ಮತ್ತು ಉತ್ತರದಾಯಿಗಳು ಮೇಲಿನ ಸಭೆಗೆ ಆಗಮಿಸಬೇಕಾಗಿ ಅಧಿಕೃತ ಪ್ರಕಟಣೆ ಕೋರಿದೆ.

## ನಾಳೆ ವಿಧಾನಸೌಧದಲ್ಲಿ ಜಂಟಿ ಅಧಿವೇಶನ

ಬೆಂಗಳೂರು, ಸೆಪ್ಟೆಂಬರ್ 23 (ಕರ್ನಾಟಕ ವಾರ್ತೆ):

ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ "ಪ್ರಜಾಪ್ರಭುತ್ವ ಸಂಸದೀಯ ಮೌಲ್ಯಗಳ ರಕ್ಷಣೆ" ಕುರಿತು ಜಂಟಿ ಅಧಿವೇಶನವು ಸೆಪ್ಟೆಂಬರ್ 24 ರಂದು ಮಧ್ಯಾಹ್ನ 2.30 ಗಂಟೆಗೆ ವಿಧಾನಸಭೆಯ ಸಭಾಂಗಣದಲ್ಲಿ ನಡೆಯಲಿದೆ.

ಈ ಅಧಿವೇಶನದಲ್ಲಿ ಲೋಕಸಭೆಯ ಸನ್ಮಾನ್ಯ ಸಭಾಧ್ಯಕ್ಷರಾದ ಓಂ ಬಿರ್ಲಾ ಅವರು ಉಭಯ ಸದನಗಳ ಸದಸ್ಯರುಗಳನ್ನು ಉದ್ದೇಶಿಸಿ ಪ್ರಧಾನ ಭಾಷಣ ಮಾಡಲಿದ್ದಾರೆ ಹಾಗೂ ಅತ್ಯುತ್ತಮ ಶಾಸಕ ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ. ಕರ್ನಾಟಕ ವಿಧಾನಪರಿಷತ್ತಿನ ಸನ್ಮಾನ್ಯ ಸಭಾಪತಿಗಳಾದ ಬಸವರಾಜ ಎಸ್ ಹೊರಟ್ಟಿ, ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಭಾಷಣ ಮಾಡಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಡಿಪ್ಲೋಮಾ ಪ್ರವೇಶ ಪ್ರಕ್ರಿಯೆ ದಿನಾಂಕ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 23, (ಕರ್ನಾಟಕ ವಾರ್ತೆ):

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯು ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆಯಲ್ಲಿ ಪ್ರಥಮ ಸೆಮಿಸ್ಟರ್ ಟೆಕ್ಸ್ಟೈಲ್ ಟೆಕ್ನಾಲಜಿ ಡಿಪ್ಲೋಮಾ ಕೋರ್ಸಿಗೆ ಸೆಪ್ಟೆಂಬರ್ 30 ರವರೆಗೆ ಪ್ರವೇಶ ಪ್ರಕ್ರಿಯೆಯನ್ನು ವಿಸ್ತರಿಸಲಾಗಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ಎಸ್.ಎಲ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇಕಡ 35% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಅಥವಾ ಐ.ಟಿ.ಐ / ಪಿ.ಯು.ಸಿಯಲ್ಲಿ ಉತ್ತೀರ್ಣ / ಅನುತ್ತೀರ್ಣವಾಗಿರಬಹುದು. ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ನೇರವಾಗಿ ಕಾಲೇಜಿಗೆ ಬಂದು ಪ್ರವೇಶ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9481101049, 9448705205, 080-22267580 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವಾಲಯ ಗ್ರಂಥಾಲಯದಲ್ಲಿ ಅಪ್ರೆಂಟಿಸ್ ಟ್ರೈನಿಗಳಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 23, (ಕರ್ನಾಟಕ ವಾರ್ತೆ):

ರಾಜ್ಯ ಸರ್ಕಾರ ಸಚಿವಾಲಯ ಗ್ರಂಥಾಲಯದಲ್ಲಿ 2021-22ರ ಸಾಲಿಗೆ ಒಂದು ವರ್ಷದ ಅವಧಿಗೆ ಅಪ್ರೆಂಟಿಸ್ ಟ್ರೈನಿಗಳನ್ನು ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಗ್ರಾಜುಯೇಟ್ ಅಪ್ರೆಂಟಿಸ್ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ) 04 ಹುದ್ದೆಗಳಿಗೆ ಲೈಬ್ರರಿ ಸೈನ್ಸ್‌ನಲ್ಲಿ ಪದವಿ (ಬಿ.ಎಲ್.ಐ.ಎಸ್.ಸಿ) ಅಭ್ಯರ್ಥಿಗಳಿಗೆ ಮಾಹೆಯಾನ ರೂ.10,000/-, ಸ್ಟೈಫಂಡ್ ನೀಡಲಾಗುವುದು. ಟೆಕ್ನೀಷಿಯನ್ ಅಪ್ರೆಂಟಿಸ್ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ) 06 ಹುದ್ದೆಗಳಿಗೆ ಲೈಬ್ರರಿ ಸೈನ್ಸ್‌ನಲ್ಲಿ ಡಿಪ್ಲೋಮಾ ಅಭ್ಯರ್ಥಿಗಳಿಗೆ ಮಾಹೆಯಾನ ರೂ.8,000/-, ಟೆಕ್ನೀಷಿಯನ್ ಅಪ್ರೆಂಟಿಸ್ (ಕಮರ್ಷಿಯಲ್ ಪ್ರಾಕ್ಟಿಸ್) 01 ಹುದ್ದೆಗೆ ಕಮರ್ಷಿಯಲ್ ಪ್ರಾಕ್ಟಿಸ್‌ನಲ್ಲಿ ಡಿಪ್ಲೋಮಾ ಅಭ್ಯರ್ಥಿಗಳಿಗೆ ಮಾಹೆಯಾನ ರೂ.8,000/-, ಸ್ಟೈಫಂಡ್ ನಿಗಧಿಪಡಿಸಲಾಗಿರುತ್ತದೆ.

ನಿಗಧಿತ ಶಿಕ್ಷಣಾರ್ಹತೆಯನ್ನು 2019 ಮೇ ತಿಂಗಳ ನಂತರ ಪಡೆದವರು ಮಾತ್ರ ಈ ತರಬೇತಿಗೆ ಅರ್ಹರಾಗಿರುತ್ತಾರೆ. ತರಬೇತಿಗೆ ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಮೀಸಲಾತಿಯ ಆಧಾರದ ಮೇಲೆ ನಿಯಮಾನುಸಾರ ಆಯ್ಕೆ ಮಾಡಲಾಗುವುದು.

ಈಗಾಗಲೇ ಅಪ್ರೆಂಟಿಸ್ ತರಬೇತಿ ಪಡೆದವರಾಗಿದ್ದರೆ ಅಂತಹವರು ಅರ್ಜಿಗಳನ್ನು ಸಲ್ಲಿಸುವಂತಿಲ್ಲ. ಮುಕ್ತ ವಿಶ್ವವಿದ್ಯಾನಿಲಯ/ ದೂರ ಶಿಕ್ಷಣದ ಮೂಲಕ ಪದವಿಗಳನ್ನು ಪಡೆದ ಅಭ್ಯರ್ಥಿಗಳನ್ನು ತರಬೇತಿಗೆ ಪರಿಗಣಿಸುವುದಿಲ್ಲ.

ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಮುಖ್ಯ ಗ್ರಂಥಾಧಿಕಾರಿ, ಸಚಿವಾಲಯ ಗ್ರಂಥಾಲಯ, ಕೊಠಡಿ ಸಂಖ್ಯೆ: 11, ನೆಲಮಹಡಿ, ವಿಧಾನಸೌಧ, ಬೆಂಗಳೂರು-560001 ಇವರಿಗೆ ಅಕ್ಟೋಬರ್ 25, 2021 ರೊಳಗೆ ಸಲ್ಲಿಸಬೇಕು. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-22033462/3011 ಅಥವಾ ಇ-ಮೇಲ್ ವಿಳಾಸ: ksecretariatlibrary@gmail.com ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ದಸರಾ ಹಾಗೂ ದೀಪಾವಳಿ ಹಬ್ಬದ ಪ್ರಯುಕ್ತ 1000 ಹೆಚ್ಚುವರಿ ವಿಶೇಷ ಸಾರಿಗೆ ವ್ಯವಸ್ಥೆ ಸೇವೆ

ಬೆಂಗಳೂರು, ಸೆಪ್ಟೆಂಬರ್ 23, (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯರಸ್ತೆ ಸಾರಿಗೆ ನಿಗಮವು ದಸರಾ ಹಾಗೂ ದೀಪಾವಳಿ ಹಬ್ಬದ ದಿನಗಳ ಅವಧಿಯಲ್ಲಿ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಬೆಂಗಳೂರಿನಿಂದ ರಾಜ್ಯದೊಳಗಿನ ಸ್ಥಳಗಳಾದ ಧರ್ಮಸ್ಥಳ, ಕುಕ್ಕೆಸುಬ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ಮೈಸೂರು, ಮಡಿಕೇರಿ, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್ ಮುಂತಾದ ಸ್ಥಳಗಳಿಗೆ ಮತ್ತು ಅಂತರರಾಜ್ಯದ ತಿರುಪತಿ, ವಿಜಯವಾಡ, ಹೈದರಾಬಾದ್, ತಿರುವನಂತಪುರಂ, ಕೊಟ್ಟಾಯಂ, ಚೆನ್ನೈ, ಕೊಯಮತ್ತೂರು, ಪೂನಾ, ಪಣಜಿ ಮುಂತಾದ ಸ್ಥಳಗಳಿಗೆ ಹಾಗೂ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ದಸರಾ ಹಬ್ಬದ ಅವಧಿ ದಿನಾಂಕ 13.10.2021 ರಿಂದ 21.10.2021 ರವರೆಗೆ 1000 ಹೆಚ್ಚುವರಿ ವಿಶೇಷ ಬಸ್ ವ್ಯವಸ್ಥೆ ಹಾಗೂ ದೀಪಾವಳಿ ಹಬ್ಬದ ಅವಧಿ ದಿನಾಂಕ 29.10.2021 ರಿಂದ 07.11.2021 ರವರೆಗೆ 1000 ಹೆಚ್ಚುವರಿ ವಿಶೇಷ ವಾಹನಗಳ ಸೇವೆಯನ್ನು ಒದಗಿಸಲಿದೆ.

**ಹೆಚ್ಚುವರಿ ವಿಶೇಷ ಸಾರಿಗೆಗಳ ಪ್ರಯಾಣ ದರಗಳಲ್ಲಿ ಯಾವುದೇ ಹೆಚ್ಚಳ ಇರುವುದಿಲ್ಲ.** ಕರಾರಸಾ ನಿಗಮದ ವೆಬ್‌ಸೈಟ್ ವಿಳಾಸ: www.ksrtc.karnataka.gov.in ಹಾಗೂ ಕರ್ನಾಟಕ ಮತ್ತು ಅಂತರರಾಜ್ಯದಲ್ಲಿರುವ ಗಣಕೀಕೃತ ಬುಕಿಂಗ್ ಕೌಂಟರ್‌ಗಳ ಮುಖೇನ ಈ ಸಾರಿಗೆಗಳಿಗೆ ಮುಂಗಡ ಆಸನ ಕಾಯ್ದಿರಿಸುವ ಸೌಲಭ್ಯ ಕಲ್ಪಿಸಲಾಗಿದೆ. ಸಾರ್ವಜನಿಕ ಪ್ರಯಾಣಿಕರು ಹೆಚ್ಚುವರಿ ವಿಶೇಷ ಸಾರಿಗೆಗಳ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## operation of 1000 additional buses during the Dasara & Deepavali festival

Bengaluru, September (Karnataka Information):

In view of Dasara and Deepavali festival for the convenience of travelling public KSRTC is planning to operate 1000 additional buses during Dasara festival from 13.10.2021 to 21.10.2021 and 1000 additional buses during Deepavali festival from 29.10.2021 to 07.11.2021. Buses will be

operated from Bengaluru to Dharmastala, Kukkesubramanya, Shivamogga, Hassan, Mangaluru, Kundapura, Sringeri, Horanadu, Mysuru, Madikere, Davangere, Hubballi, Dharwad, Belagavi, Vijayapura, Gokarna, Sirsi, Karwar, Raichur, Kalaburagi, Ballari, Koppala, Yadgir, Bidar etc., within the state and to Inter-state places such as Tirupathi, Vijayawada, Hyderabad, Thiruvananthpuram, Kottayam, Chennai, Coimbatore, Pune etc., and from different places to Bengaluru.

**There will not be any hike in the passenger fares in these services**. Passengers can book tickets in advance through online by logging on to KSRTC website www.ksrtc.karnataka.gov.in and through Advance Reservation counters in Karnataka and other states. Travelling public are requested to avail the benefit of these services.

## ಸಂಚಾರಿ ಗ್ರಂಥಾಲಯ ವಾಹನ ದುರಸ್ತಿ: ಸಾರ್ವಜನಿಕ ಓದುಗರು ಸಹಕರಿಸಲು ಮನವಿ

ಬೆಂಗಳೂರು, ಸೆಪ್ಟೆಂಬರ್ 23, (ಕರ್ನಾಟಕ ವಾರ್ತೆ):

ಬೆಂಗಳೂರಿನ ಕೇಂದ್ರ ವಲಯದ ನಗರ ಕೇಂದ್ರ ಗ್ರಂಥಾಲಯದ ಸಂಚಾರಿ ಗ್ರಂಥಾಲಯ ವಾಹನವನ್ನು ಸದೃಢತೆ ತಪಾಸಣೆಗಾಗಿ ಬೆಂಗಳೂರಿನ ಆರ್.ಟಿ.ಓ ಅವರು ಸೂಚಿಸಿದ್ದರಿಂದ ವಾಹನವನ್ನು ದುರಸ್ತಿಗೊಳಿಸಲು ಕಾರ್ಖಾನೆಗೆ ಬಿಡಲಾಗಿದೆ. ದುರಸ್ತಿಗೊಂಡ ನಂತರ ನಿಗಧಿಪಡಿಸಿರುವ ಬಡಾವಣೆಗಳಲ್ಲಿ ಎಂದಿನಂತೆ ಸಾರ್ವಜನಿಕ ಓದುಗರಿಗೆ ಸೇವೆ ನೀಡಲಾಗುವುದು. ಸಾರ್ವಜನಿಕ ಓದುಗರು ಸಹಕರಿಸಬೇಕು ಎಂದು ಬೆಂಗಳೂರಿನ ಕೇಂದ್ರ ವಲಯದ ನಗರ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಸೆಪ್ಟೆಂಬರ್ 23, (ಕರ್ನಾಟಕ ವಾರ್ತೆ):

**ದಿನಾಂಕ: 23.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 30 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 43 | ಉತ್ತಮ | CO |
| 3 | ಕವಿಕ, ಮೈಸೂರುರಸ್ತೆ | 71 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 30 | ಉತ್ತಮ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 88 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | * | * | * |

| | | | | |
|---|---|---|---|---|
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | * | * | * |
| **(23.9.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | * | * | * |
| 9 | ಪೀಣ್ಯ | 43 | ಉತ್ತಮ | $PM_{10}$ |
| 10 | ಬಿಟಿಎಂ ಲೇಔಟ್ | 89 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 23.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 28 | Good | $PM_{10}$ |
| 2 | Jayanagar 5th Block, Shalini ground | 43 | Good | CO |
| 3 | KAVIKA, Mysore Road | 71 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 30 | Good | CO |
| 5 | HSR Layout, near Central Silkboard | 88 | Satisfactory | CO |
| 6 | City Railway Station, Magestic, Bengaluru | * | * | * |

| | | | | |
|---|---|---|---|---|
| 7 | Saneguruvanahalli, NisargaBhavan, KSPCB, Shivanagara | * | * | * |
| **(23.9.2021 at 10.05 AM)** | | | | |
| 8 | BWSSB, Kadabesanahalli | * | * | * |
| 9 | Peenya | 43 | Good | $PM_{10}$ |
| 10 | BTM Layout | 89 | Satisfactory | CO |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |